ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಿಬ್ಬಂದಿ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ

ದಿನಾಂಕ : DATE : 17/04/2019

ಸಲ್ಲಿಕೆ 140 ಕೆಎಎಸ್ ಅಧಿಕಾರಿಗಳ ಬಡ್ತಿ ಬಗ್ಗೆ ಮಾಹಿತಿ

# ಹಿಂಬಡ್ತಿ-ಮುಂಬಡ್ತಿ ಪಟ್ಟಿ ಕೋರ್ಟ್‌ಗೆ

ಕ.ಪ್ರ. 17-4-19



**ಬೆಂಗಳೂರು:** ಕಳೆದ 1998ನೇ ಸಾಲಿನ ಕೆಎಎಸ್ ಅಧಿಕಾರಿಗಳ ನೇಮಕಾತಿಯ ಹಗರಣಕ್ಕೆ ಸಂಬಂಧಿಸಿದಂತೆ ವಿಭಾಗೀಯ ಪೀಠದ ತೀರ್ಪಿನನ್ವಯ ಕೆಪಿಎಸ್‌ಸಿ ಪ್ರಕಟಿಸಿರುವ ಪರಿಷ್ಕೃತ ನೇಮಕಾತಿ ಅಧಿಸೂಚನೆ ಅನ್ವಯ 140 ಅಧಿಕಾರಿಗಳಿಗೆ ನೀಡಲಾಗಿರುವ ಹಿಂಬಡ್ತಿ-ಮುಂಬಡ್ತಿ ಪಟ್ಟಿಯನ್ನು ರಾಜ್ಯ ಸರ್ಕಾರ ಮಂಗಳವಾರ ಹೈಕೋರ್ಟ್‌ಗೆ ಸಲ್ಲಿಸಿತು.

ಕೆಪಿಎಸ್‌ಸಿ ನೇಮಕಾತಿ ಹಗರಣ ಸಂಬಂಧ ಹೈಕೋರ್ಟ್ ವಿಭಾಗೀಯ ನ್ಯಾಯಪೀಠ 2016ರ ಜೂ.21ರಂದು ಹೊರಡಿಸಿದ ಆದೇಶ ಜಾರಿಗೊಳಿಸದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ವಿರುದ್ಧ ಎಸ್.ಶ್ರೀನಿವಾಸ್ ಮತ್ತಿತರ ಅಭ್ಯರ್ಥಿಗಳು ಸಲ್ಲಿಸಿದ್ದ ನ್ಯಾಯಾಂಗ ನಿಂದನೆ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಬಿ.ವಿ.ನಾಗರತ್ನ ಹಾಗೂ ನ್ಯಾ.ಎಚ್.ಟಿ. ನರೇಂದ್ರ ಪ್ರಸಾದ್ ಅವರಿದ್ದ ವಿಭಾಗೀಯ ಪೀಠಕ್ಕೆ ರಾಜ್ಯ ಅಡ್ವೋಕೇಟ್ ಜನರಲ್ ಉದಯ ಹೊಳ್ಳ ಈ ಪಟ್ಟಿ ಸಲ್ಲಿಸಿದರು. ನ್ಯಾಯಪೀಠ ಪ್ರತಿಕ್ರಿಯಿಸಿ, ಕೋರ್ಟ್ ಆದೇಶಗಳ ಜಾರಿಗೆ ಚುನಾವಣಾ ಆಯೋಗ ಹಾಗೂ ನೀತಿ ಸಂಹಿತೆಯೂ ಅಡ್ಡಿಯಾಗುವುದಿಲ್ಲ ಎಂದು ಹೇಳಿತು.

ಇದನ್ನು ಪರಿಗಣಿಸಿದ ನ್ಯಾಯಪೀಠ, ಕರ್ನಾಟಕದಲ್ಲಿ ಮತದಾನ ಮುಗಿಯಲಿ. ನಂತರ ಈ ಅರ್ಜಿ ವಿಚಾರಣೆ ಮುಂದುವರಿಸಬಹುದು ಎಂದು ಅಭಿಪ್ರಾಯಪಟ್ಟಿತಲ್ಲದೆ, ಸರ್ಕಾರ ಸಲ್ಲಿಸಿರುವ ಪಟ್ಟಿಗೆ ತಕರಾರು ಇದ್ದರೆ ತಿಳಿಸುವಂತೆ ಅರ್ಜಿದಾರರ ಪರ ವಕೀಲರಿಗೆ ಸೂಚಿಸಿತು. ನ್ಯಾಯಪೀಠ ವಿಚಾರಣೆಯನ್ನು ಏಪ್ರಿಲ್ 25ಕ್ಕೆ ವಿಚಾರಣೆ ಮುಂದೂಡಿತು.

3